# All India Radio: Bangalore
# Regional Bulletin In Kannada
# 11.04.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ನಿರಂತರ ಪರಿಶ್ರಮ ಮತ್ತು ಆತ್ಮ ವಿಶ್ವಾಸ ವಿದ್ಯಾರ್ಥಿಗಳ ಸ್ವಯಂ ವಿಕಸನಕ್ಕೆ ಭದ್ರ ಬುನಾದಿ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
2. ಗುತ್ತಿಗೆದಾರರಿಗೆ ಕಮಿಷನ್ ಕೇಳಿದ್ದರೆ ಲೋಕಾಯುಕ್ತರಿಗೆ ದೂರು ನೀಡಬಹುದು - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಕೊಂಕಣ ರೈಲ್ವೆ, ಹಾಸನ-ಮಂಗಳೂರು ರೈಲ್ವೆ ಅಭಿವೃದ್ಧಿ ನಿಗಮ ಮತ್ತು ಭಾರತೀಯ ರೈಲ್ವೆ ವಿಲೀನ ಪ್ರಯತ್ನ ಪ್ರಗತಿಯಲ್ಲಿ
4. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಿಂದ ಮಕ್ಕಳಿಗೆ ಬೇಸಿಗೆ ಶಿಬಿರ

<><><><>

ನಿರಂತರ ಪರಿಶ್ರಮ ಮತ್ತು ಆತ್ಮ ವಿಶ್ವಾಸದಿಂದ ಉತ್ತಮ ಭವಿಷ್ಯದ ಸ್ವಯಂ ವಿಕಸನಕ್ಕೆ ವಿದ್ಯಾರ್ಥಿ ಸಮುದಾಯ ಮುಂದಾಗಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಲಹೆ ನೀಡಿದ್ದಾರೆ. ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ೧೩ನೇ ಘಟಿಕೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಾವು ಪಡೆದ ವಿದ್ಯೆ ರಾಷ್ಟ್ರದ ಶ್ರೇಯೋಭಿವೃದ್ಧಿಗೆ ಪೂರಕವಾಗಬೇಕು. ಹೊಸ ತಂತ್ರಜ್ಞಾನ ಅಳವಡಿಸಿಕೊಂಡು, ಹೊಸ ಸವಾಲುಗಳನ್ನು ಎದುರಿಸಲು ವಿದ್ಯಾರ್ಥಿ ಸಮುದಾಯ ಸಜ್ಜಾಗಬೇಕು ಎಂದರು.

**ಧ್ವನಿ : ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ (೩೦ ಸೆಕೆಂಡ್‌ಗಳು)**

ಜಾಗತೀಕರಣದ ಪ್ರಸ್ತುತ ಸಂದರ್ಭದಲ್ಲಿ ಸಾಮಾಜಿಕ ರಾಷ್ಟ್ರೀಯ ಮೌಲ್ಯಗಳು ಮತ್ತು ನಂಬಿಕೆಗಳು ಬದಲಾಗುತ್ತಿದ್ದು, ಇದರ ಪರಿಣಾಮವಾಗಿ ಶಿಕ್ಷಣ ಕ್ಷೇತ್ರಕ್ಕೆ ಹೊಸ ಸವಾಲುಗಳು ಎದುರಾಗುತ್ತಿವೆ. ಈ ಸವಾಲನ್ನು ಸಮರ್ಥವಾಗಿ ನಿಭಾಯಿಸುವುದರೊಂದಿಗೆ ಯಾವುದೇ ಪಕ್ಷಪಾತವಿಲ್ಲದೇ ಶಿಕ್ಷಣವನ್ನು ನೀಡಲು ಸರ್ಕಾರ ಮತ್ತು ಉನ್ನತ ಶಿಕ್ಷಣ ಇಲಾಖೆ ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಹೇಳಿದರು.

**ಧ್ವನಿ : ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ (೨೮ ಸೆಕೆಂಡ್‌ಗಳು)**

ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳು ಸೇರಿದಂತೆ ನೂತನ ಪದವೀದರರಿಗೆ ವಿವಿಧ ಪದವಿಗಳು ಮತ್ತು ಪದಕಗಳನ್ನು ಪ್ರದಾನ ಮಾಡಲಾಯಿತು.

<><><>

ರಾಜ್ಯದಲ್ಲಿ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡಲು ಕಮಿಷನ್ ಕೇಳಿದರೆ ಲೋಕಾಯುಕ್ತಕ್ಕೆ ದೂರು ನೀಡಬಹುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸೌಧದ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಲ್ ಪಾವತಿ ವಿಚಾರವಾಗಿ ಗುತ್ತಿಗೆದಾರರು ಸಚಿವರನ್ನು ಕೇಳಬೇಕಾಗಿಲ್ಲ. ಅವರಿಗೆ ಇಲಾಖೆಯ ಅನುದಾನದ ಬಗ್ಗೆ ತಿಳಿದಿರುತ್ತದೆ. ಅನುದಾನವೇ ಇಲ್ಲದಿರುವಾಗ ಗುತ್ತಿಗೆ ಹೇಗೆ ತೆಗೆದುಕೊಂಡರು ಎಂದು ಗುತ್ತಿಗೆದಾರರನ್ನೇ ಕೇಳಬೇಕಾಗುತ್ತದೆ ಎಂದರು. ಅನುದಾನ ಇಲ್ಲದ ಕಾಮಗಾರಿಯನ್ನು ತೆಗೆದುಕೊಂಡು ಈಗ ಬಿಲ್ ಪಾವತಿಗೆ ಮನವಿ ಮಾಡುತ್ತಿರುವುದು ಸರಿಯಲ್ಲ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

<><><>

ಕಾಂಗ್ರೆಸ್ ಪಕ್ಷ ವರ್ಷಾನುಗಟ್ಟಲೆಯಿಂದ ದಲಿತರ ಉದ್ಧಾರದಲ್ಲಿ ನಿರ್ಲಕ್ಷ್ಯ ಧೋರಣೆಯನ್ನು ಹೊಂದಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರು ವಿಧಾನಸೌಧದ ಅಂಗಳದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಯ ಬಳಿ ಭೀಮಹೆಜ್ಜೆ ಒಂದು ನೂರರ ಸಂಭ್ರಮ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹೆಸರನ್ನು ಕಾಂಗ್ರೆಸ್ ಪಕ್ಷ ದುರುಪಯೋಗಪಡಿಸಿಕೊಂಡಿದೆ. ತಾವು ದಲಿತ ಪರವಾಗಿರುವುದಾಗಿ ಹೇಳಿಕೊಳ್ಳುವ ಕಾಂಗ್ರೆಸ್ ನಾಯಕರು ದಲಿತರನ್ನು ಶೋಷಣೆ ಮುಕ್ತಗೊಳಿಸುವಲ್ಲಿ ಪೊಳ್ಳು ಭರವಸೆಗಳನ್ನು ನೀಡುತ್ತಿದ್ದಾರೆ. ವಕ್ಫ್ ಭೂಕಬಳಿಕೆ ಪ್ರಕರಣಗಳಲ್ಲಿ ದಲಿತರು ಹೆಚ್ಚಿನ ಸಂಖ್ಯೆಯಲ್ಲಿ ಬಾಧಿತರಾಗಿದ್ದಾರೆ. ವಕ್ಫ್ ತಿದ್ದುಪಡಿ ಮಸೂದೆಯ ಬಗ್ಗೆ ಕಾಂಗ್ರೆಸ್ ಪಕ್ಷದ ನಿಲುವು, ದಲಿತೋದ್ಧಾರದ ಬಗ್ಗೆ ಆ ಪಕ್ಷಕ್ಕೆ ಇರುವ ಕಾಳಜಿಯನ್ನು ಬಿಂಬಿಸುತ್ತದೆ ಎಂದು ಆರ್. ಅಶೋಕ ಹೇಳಿದರು.

<><><>

ಬೆಂಗಳೂರು ಅನಿಮೇಷನ್ ಉದ್ಯಮ ಸಂಸ್ಥೆ - ಅಬಯ್ ವತಿಯಿಂದ, ವಿಡಿಯೋ ತಂತ್ರಜ್ಞಾನದ ಪ್ರತಿಷ್ಠಿತ ವೇವ್ಸ್ ಚಾಲೆಂಜ್‌ನ ವಿಎಫ್‌ಎಕ್ಸ್ ವರ್ಗದಲ್ಲಿ ಅಂತಿಮ ಹಂತದ ಪೂರ್ವಭಾವಿ ಸ್ಪರ್ಧೆ ಇಂದು ಬೆಂಗಳೂರಿನಲ್ಲಿ ನಡೆಯಿತು. ಮುಂಬೈನಲ್ಲಿ ಮೇ ೧ ರಿಂದ ೪ರವರೆಗೆ ನಡೆಯಲಿರುವ ದೇಶದ ಮನರಂಜನೆ ಮತ್ತು ಮಾಧ್ಯಮ ಕ್ಷೇತ್ರದ ಅಭಿವೃದ್ಧಿ ಬಿಂಬಿಸುವ ವೇವ್ಸ್ ಶೃಂಗಸಭೆ ೨೦೨೫ರಲ್ಲಿ ಪ್ರತಿಷ್ಠಿತ ಬಹುಮಾನ ವಿಜೇತರ ಹೆಸರುಗಳನ್ನು ಪ್ರಕಟಿಸಲಾಗುವುದು. ವಿಡಿಯೋ ತಂತ್ರಜ್ಞಾನ ವಲಯದ ವೃತ್ತಿಪರರು, ವಿದ್ಯಾರ್ಥಿಗಳು ಹಾಗೂ ಆಸಕ್ತರ ವರ್ಗಗಳಿಂದ ತಲಾ

ಇಬ್ಬರು ಅತ್ಯುತ್ತಮ ಸ್ಪರ್ಧಿಗಳ ಆಯ್ಕೆಯಾಗಲಿದೆ ಎಂದು ಅಬಯ್ ಸಂಸ್ಥೆಯ ಕಾರ್ಯದರ್ಶಿ ಆರ್.ಕೆ. ಚಾಂದ್ ಮಾಹಿತಿ ನೀಡಿದ್ದಾರೆ. ದಕ್ಷಿಣ ವಲಯದ ಸ್ಪರ್ಧೆಗಳಿಗಾಗಿ ಒಂದೂವರೆ ಸಾವಿರಕ್ಕೂ ಹೆಚ್ಚು ಆಸಕ್ತರಿಂದ ಅರ್ಜಿ ಸ್ವೀಕರಿಸಲಾಗಿತ್ತು. ಸೂಪರ್ ಹೀರೊ ಪವರ್ ಎನ್ನುವ ವಿಷಯ ಕುರಿತಂತೆ ವಿಎಫ್‌ಎಕ್ಸ್ ತಂತ್ರಜ್ಞಾನ ಬಳಸಿ ೨೦ ಸೆಕೆಂಡ್‌ಗಳ ವಿಡಿಯೋಗಳನ್ನು ಸಿದ್ಧಪಡಿಸುವಂತೆ ಸ್ಪರ್ಧಿಗಳಿಗೆ ಸೂಚಿಸಲಾಗಿತ್ತು. ತೀರ್ಪುಗಾರರ ತಂಡ ೧೪ ಅತ್ಯುತ್ತಮ ಚಿತ್ರಗಳನ್ನು ಅಂತಿಮಗೊಳಿಸಿದೆ. ಈ ಸ್ಪರ್ಧಿಗಳಲ್ಲಿ ಆಯ್ದ ಆರು ಸ್ಪರ್ಧಿಗಳು ಮುಂಬೈನಲ್ಲಿ ನಡೆಯುವ ಶೃಂಗಸಭೆಯಲ್ಲಿ ಅಂತಿಮ ಹಂತದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು. ಈ ಕುರಿತು ಅಬಯ್ ಸಂಸ್ಥೆಯ ಸಂಚಾಲಕರಾದ ಬಿ.ಎಸ್. ಶ್ರೀನಿವಾಸ್ ಅವರಿಂದ ಮಾಹಿತಿ

**ಧ್ವನಿ : ಬಿ.ಎಸ್. ಶ್ರೀನಿವಾಸ್ (೨೮ ಸೆಕೆಂಡ್‌ಗಳು)**

<><><><>

ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದ್ದು, ಗುತ್ತಿಗೆದಾರರ ಆರೋಪಗಳು ಮಿತಿಮೀರುತ್ತಿವೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂತಹ ಆರೋಪಗಳು, ಮುಖ್ಯಮಂತ್ರಿಗಳ ಸಲಹೆಗಾರರು ಇತ್ತೀಚೆಗೆ ರಾಜ್ಯ ಸರ್ಕಾರದ ಬಗ್ಗೆ ವ್ಯಕ್ತಪಡಿಸಿರುವ ಅಭಿಪ್ರಾಯದಿಂದ ಸಾಬೀತಾಗುತ್ತಿವೆ ಎಂದರು. ರಾಜ್ಯದಲ್ಲಿ ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವಲ್ಲಿ ಸ್ಪರ್ಧೆ ಇಲ್ಲ. ಜನರ ಅನುಕೂಲ ದೃಷ್ಟಿಯಿಂದ ಸಾಧಕ-ಬಾಧಕ ಪರಿಶೀಲಿಸಿ ನಿರ್ಧರಿಸಲಾಗುವುದು ಎಂದು ಅವರು ಹೇಳಿದರು. ಬೆಂಗಳೂರು-ಧಾರವಾಡ ವಂದೇ ಭಾರತ್ ರೈಲನ್ನು ಬೆಳಗಾವಿಯವರೆಗೂ ವಿಸ್ತರಿಸುವ ಬಗ್ಗೆ ಸಧ್ಯದಲ್ಲೇ ನಿರ್ಧಾರ ಪ್ರಕಟವಾಗಲಿದೆ ಎಂದು ಸಚಿವ ಸೋಮಣ್ಣ ತಿಳಿಸಿದರು.

<><><><>

ಕೊಂಕಣ ರೈಲ್ವೆ ಹಾಗೂ ಹಾಸನ-ಮಂಗಳೂರು ರೈಲ್ವೆ ಅಭಿವೃದ್ಧಿ ನಿಗಮ - ಊಂಖಆಅಐ ಅನ್ನು ಭಾರತೀಯ ರೈಲ್ವೆ ಜೊತೆ ವಿಲೀನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ರೈಲ್ವೆ ಸಚಿವರೊಂದಿಗೆ ಈಗಾಗಲೇ ಮಾತುಕತೆ ನಡೆಸಲಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಲೀನ ಪ್ರಕ್ರಿಯೆ ನಡೆದರೆ ಈ ಭಾಗಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ವಿಶೇಷ ಪ್ರಯತ್ನ ಸಾಗಿದೆ ಎಂದರು. ಮಂಗಳೂರು-ಬೆಂಗಳೂರು ಸಂಪರ್ಕಿಸುವ ಶಿರಾಡಿ ಘಾಟ್ ಹೆದ್ದಾರಿ ಹಾಗೂ ರೈಲು ಮಾರ್ಗ ಅಭಿವೃದ್ಧಿಗೆ ಸಂಬಂಧಿಸಿ ವಿಸ್ತೃತ ಕಾರ್ಯಸಾಧ್ಯತಾ ವರದಿ - ಡಿಪಿಆರ್ ಸಿದ್ಧಪಡಿಸುವಂತೆ

ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಶಿರಾಡಿ ಘಾಟ್ ಹೆದ್ದಾರಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ - ಎನ್‌ಎಚ್‌ಎಐ ಹಾಗೂ ಶಿರಾಡಿ ಘಾಟ್‌ನಲ್ಲಿ ಪ್ರತ್ಯೇಕ ರೈಲು ಮಾರ್ಗ ನಿರ್ಮಾಣಕ್ಕೆ ರೈಲ್ವೆ ಇಲಾಖೆ ಕೂಡ ಡಿಪಿಆರ್ ಸಿದ್ಧಪಡಿಸಲು ಮುಂದಾಗಿದೆ ಎಂದು ಸಂಸದರು ತಿಳಿಸಿದರು. ಎರಡು ಇಲಾಖೆಗಳು ಪ್ರತ್ಯೇಕವಾಗಿ ಡಿಪಿಆರ್ ಸಿದ್ಧಪಡಿಸಿದರೆ ಅನುಮೋದನೆಗೆ ಕಷ್ಟವಾಗುತ್ತದೆ. ಇದರ ಬದಲು ಎರಡು ಇಲಾಖೆಗಳು ಸೇರಿ ಒಂದೇ ಡಿಪಿಆರ್ ಸಿದ್ಧಪಡಿಸಬೇಕು. ಆಗ ಪರಿಸರ ಇಲಾಖೆಯ ನಿರಪೇಕ್ಷಣೆ ಪಡೆದುಕೊಳ್ಳಲು ಅನುಕೂಲವಾಗಲಿದೆ. ಅಲ್ಲದೆ ಇದರಿಂದ ಪರಿಸರ ಹಾನಿಯ ಪ್ರಮಾಣವನ್ನೂ ತಗ್ಗಿಸಲು ಸಾಧ್ಯವಾಗಲಿದೆ ಎನ್ನುವ ಅಭಿಪ್ರಾಯ ಕೇಳಿ ಬರುತ್ತಿದೆ. ಆದಾಗ್ಯೂ ಈ ಕುರಿತಂತೆ ಸಂಬಂಧಪಟ್ಟ ಇಲಾಖೆಗಳ ಮುಖ್ಯಸ್ಥರ ಜೊತೆ ಚರ್ಚೆ ನಡೆಸಲಾಗಿದ್ದು, ಜಂಟಿ ಡಿಪಿಆರ್‌ನಿಂದ ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯಾಗದು ಎಂಬ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಸಂಸದ ಚೌಟ ಹೇಳಿದರು.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮಕ್ಕಳಿಗಾಗಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ವಿನೂತನ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ೧೦ ರಿಂದ ೧೫ ವರ್ಷದ ಮಕ್ಕಳಿಗಾಗಿ ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆ ಆವರಣದಲ್ಲಿ ಪೊಲೀಸ್ ಚಿಟ್ಟೆಗಳು ಬೇಸಿಗೆ ಶಿಬಿರ ೧೫ ದಿನಗಳ ಕಾಲ ನಡೆಯಲಿದೆ. ಮಕ್ಕಳಿಗೆ ಯೋಗಭ್ಯಾಸ, ಧ್ಯಾನ, ಸ್ಮರಣಶಕ್ತಿ ಕೌಶಲ್ಯಗಳು, ಸಂಗೀತ, ನೃತ್ಯ, ಚಿತ್ರಕಲೆ, ಮೊದಲಾದ ವಿಷಯಗಳನ್ನು ಕಲಿಸಲಾಗುವುದು ಹೆಚ್ಚಿನ ಮಾಹಿತಿಗೆ ಜಿಲ್ಲಾ ಪೊಲೀಸ್ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

<><><><>

ಇಂದು ದೇಶದ ಪ್ರಮುಖ ಸಮಾಜ ಸುಧಾರಕರಲ್ಲಿ ಒಬ್ಬರಾದ ಜ್ಯೋತಿಬಾ ಫುಲೆ ಅವರ ಜನ್ಮದಿನ. ಬಡತನ, ಅನಕ್ಷರತೆ ಮತ್ತು ಅಸಮಾನತೆಯ ವಿರುದ್ಧದ ಕ್ರಾಂತಿಗೆ ಶಿಕ್ಷಣವನ್ನು ಅಸ್ತ್ರವಾಗಿಸಿಕೊಂಡ ಜ್ಯೋತಿಬಾ ಫುಲೆ ಅವರು ಭಾರತದಲ್ಲಿ ಸಾಮಾಜಿಕ ಸುಧಾರಣೆಯ ಹೊಸಯುಗಕ್ಕೆ ಮುನ್ನುಡಿ ಬರೆದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದ್ದಾರೆ. ಜಾತಿ, ಮತ, ಪಂಥಗಳ ಕಟ್ಟುಪಾಡುಗಳನ್ನು ಮೀರಿದ ಮಾನವಧರ್ಮವನ್ನು ಸಾರಿದ ಸಮಾಜ ಸುಧಾರಕ, ಸಮಾನತೆಯ ಹರಿಕಾರ, ಮಹಾತ್ಮ ಜ್ಯೋತಿಬಾ ಫುಲೆ ಅವರು ಸದಾ ಕಾಲ ಆದರ್ಶಪ್ರಾಯರು ಎಂದು ಮುಖ್ಯಮಂತ್ರಿ ಸಂದೇಶ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>